# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:18-02-2026 ರಂದು ಬುಧವಾರ ಅಪರಾಹ್ನ:03.00 ಗಂಟೆಗೆ ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ ಇಲ್ಲಿ ನಡೆದ "ವಿದ್ಯಾವಿಷಯಕ ಪರಿಷತ್ ಸಮಿತಿ ಸಭೆ"ಯ ನಡಾವಳಿಗಳು.

<u>ಹಾಜರಾದ ಸದಸ್ಯರು:</u>

1. ಪ್ರೊ. ಶರತ್ ಅನಂತಮೂರ್ತಿ, ಮಾನ್ಯ ಕುಲಪತಿಗಳು — ಅಧ್ಯಕ್ಷರು
2. ಶ್ರೀ ಎ.ಎಲ್. ಮಂಜುನಾಥ್ ಕೆ.ಎ.ಎಸ್.. ಕುಲಸಚಿವರು — ಸದಸ್ಯ ಕಾರ್ಯದರ್ಶಿಗಳು
3. ಪ್ರೊ. ಆರ್. ತಿಮ್ಮರಾಯಪ್ಪ, ಕುಲಸಚಿವರು (ಮೌಲ್ಯಮಾಪನ) — ಸದಸ್ಯರು
4. ಪ್ರೊ. ಚಂದ್ರಶೇಖರ್ ಎಸ್, ಡೀನರು, ಕಲಾ ನಿಕಾಯ — ಸದಸ್ಯರು
5. ಪ್ರೊ. ಆರ್. ಹಿರೇಮಣಿನಾಯ್ಕ್, ಡೀನರು, ವಾಣಿಜ್ಯ ನಿಕಾಯ — ಸದಸ್ಯರು
6. ಪ್ರೊ. ಗಜಾನನ ಪ್ರಭು ಬಿ., ಡೀನರು, ಶಿಕ್ಷಣ ನಿಕಾಯ — ಸದಸ್ಯರು
7. ಪ್ರೊ. ರಾಜ ನಾಯಕ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ — ಸದಸ್ಯರು
8. ಪ್ರೊ. ಗಜಾನನ ಪ್ರಭು ಬಿ, ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, — ಸದಸ್ಯರು

<u>ಪೂರ್ವಾನುಮತಿಯೊಂದಿಗೆ ಗೈರುಹಾಜರಾದ ಸದಸ್ಯರು:</u>

1. ಪ್ರೊ. ಹೆಚ್.ಎನ್. ರಮೇಶ್, ಹಣಕಾಸು ಅಧಿಕಾರಿಗಳು — ಸದಸ್ಯರು

<u>ಗೈರುಹಾಜರಾದ ಸದಸ್ಯರು:</u>

1. ಡಾ. ಜಿ. ಪ್ರಶಾಂತ ನಾಯಕ, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕರು — ಸದಸ್ಯರು
2. ಡಾ. ಕೇಶವ ಹೆಚ್, ಜಂಟಿ ನಿರ್ದೇಶಕರು

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು. 2026-27ನೇ ಸಾಲಿನ ಕಾಲೇಜುಗಳ ಸಂಯೋಜನಾ ವರದಿಗಳನ್ನು ಸ್ಥಳೀಯ ಪರಿಶೀಲನಾ ಸಮಿತಿಗಳು ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ವರದಿಗಳನ್ನು ಸರ್ಕಾರಕ್ಕೆ ತುರ್ತಾಗಿ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ಸಲ್ಲಿಸಬೇಕಾಗಿರುವುದರಿಂದ ಈ ಕುರಿತು ಅನುಮೋದನೆಗಾಗಿ ಈ ದಿನ ವಿದ್ಯಾವಿಷಯಕ ಪರಿಷತ್ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ನಂತರ ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ಸಭೆಯಲ್ಲಿ ಕುವೆಂಪು ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳ 2026-27ನೇ ಸಾಲಿನ ಸಂಯೋಜನಾ ವರದಿಗಳನ್ನು ಪರಿಶೀಲಿಸಿ ಅನುಮೋದನೆ ನೀಡಬೇಕಾಗಿದ್ದು, ಈ ಹಿನ್ನೆಲೆಯಲ್ಲಿ ಇಂದಿನ ಸಭೆ ಆಯೋಜಿಸಿದ್ದು, ಇದಕ್ಕೆ ಸಭೆಯು ಅನುಮೋದನೆ ನೀಡಬೇಕಾಗಿದೆ ಎಂದು ತಿಳಿಸಿದರು.

ನಂತರ ಕಾರ್ಯ ಸೂಚಿಯ ಪ್ರಕಾರ ವಿಷಯಗಳನ್ನು ಚರ್ಚೆಗೆ ಕೈಗೆತ್ತಿಕೊಳ್ಳಲಾಯಿತು.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

## ಕಾಲೇಜು ಅಭಿವೃದ್ಧಿ ಪರಿಷತ್ ವಿಭಾಗ

2026:ಸಿಡಿಸಿ–1.01: ಕಾಲೇಜುಗಳ 2026–27ನೇ ಸಾಲಿನ ಸಂಯೋಜಿತ ವರದಿಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆಗೆ ಮಂಡಿಸುವ ಬಗ್ಗೆ.

ಚರ್ಚೆ: ಕಾಲೇಜು ಅಭಿವೃದ್ಧಿ ಪರಿಷತ್ ನಿರ್ದೇಶಕರಾದ ಪ್ರೊ. ಗಜಾನನ ಪ್ರಭು. ಬಿ. ಇವರು ಕಾಲೇಜುಗಳ ಸಂಯೋಜನಾ ವರದಿಯನ್ನು ಸಭೆಗೆ ಮಂಡಿಸಿದರು. 2026–27ನೇ ಸಾಲಿನಲ್ಲಿ ಸ್ಥಳೀಯ ತಪಾಸಣಾ ಸಮಿತಿಗಳು ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಿಗೆ ಭೇಟಿ ನೀಡಿ ವರದಿಗಳನ್ನು ಸಲ್ಲಿಸಿರುತ್ತವೆ. ಸದರಿ ವರದಿಗಳನ್ನು ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ತುರ್ತಾಗಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಸಂಯೋಜನಾ ವರದಿಗಳನ್ನು ಇಂದಿನ ಸಭೆಯು ಈ ಬಗ್ಗೆ ಪರಿಶೀಲಿಸಿ ತನ್ನ ಅನುಮೋದನೆ ನೀಡಬೇಕೆಂದು ಕೋರಿದರು. ಮುಂದುವರೆದು ಮಾತನಾಡಿದ ಕಾಲೇಜು ಅಭಿವೃದ್ಧಿ ಪರಿಷತ್ ನಿರ್ದೇಶಕರು ಸರ್ಕಾರದ ಆದೇಶದ ದಿನಾಂಕ:23–10–2025 ರನ್ವಯ 2026–27 ರಿಂದ 2030–31ನೇ ಇಸವಿಯವರೆಗಿನ 05 ವರ್ಷಗಳ ಸಂಯೋಜನಾ ವೇಳಾಪಟ್ಟಿಯನ್ನು ಅನುಸರಿಸಬೇಕಾಗಿದ್ದು, ಇದಕ್ಕೆ ಸಭೆಯ ಅನುಮೋದನೆಯನ್ನು ಕೋರಿದರು.

ನಿರ್ಣಯ: ಸುಧೀರ್ಘ ಚರ್ಚೆಯ ನಂತರ 2026–27ನೇ ಸಾಲಿನ ಸಂಯೋಜಿತ ಕಾಲೇಜುಗಳ ಸ್ಥಳೀಯ ಸಮಿತಿ ತಪಾಸಣಾ ವರದಿಗಳನ್ನು ವಿದ್ಯಾವಿಷಯಕ ಪರಿಷತ್ ಸಮಿತಿ ಸಭೆಯು ಅನುಮೋದಿಸಿತು ಹಾಗೂ ಸದರಿ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ತನ್ನ ಅನುಮೋದನೆಯನ್ನು ನೀಡಿತು. ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ ಇಡಿ 212 ಯುಎನ್ಇ 2024 ದಿನಾಂಕ:23–10–2025ರ ಆದೇಶದಲ್ಲಿ ಜಾರಿಗೊಳಿಸಿರುವ ಸಂಯೋಜನಾ ವೇಳಾಪಟ್ಟಿಯನ್ನು ಅಳವಡಿಸಿಕೊಳ್ಳಲು ಸಭೆಯು ಅನುಮತಿಸಿತು.

---

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

18/12/24

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಕುಲಪತಿಗಳು

ಕುಲಪತಿಗಳು
ಕುವೆಂಪು ವಿಶ್ವವಿದ್ಯಾನಿಲಯ
ಶಂಕರಘಟ್ಟ – 577 451,
ಶಿವಮೊಗ್ಗ ಜಿಲ್ಲೆ.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.